| ಕರ್ನಾಟಕ ವಿಧಾನ ಪರಿಷತ್ತು | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 354 (400) |
| ಸದಸ್ಯರ ಹೆಸರು: | ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | 10-07-2023 |
| ಉತ್ತರಿಸುವವರು: | ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ವೃತ್ತದಲ್ಲಿ ದಿನಾಂಕ :24-08-2020 ರಂದು ಪ್ರಕಟಿಸಿರುವ ಉಪವಲಯ ಅರಣ್ಯಾಧಿಕಾರಿ ಮತ್ತು ಮೋಜಣಿದಾರರ ಅಂತಿಮ ಜೇಷ್ಠತಾ ಪಟ್ಟಿಯ ಪರಿಷ್ಕರಣೆ ಯಾವ ಹಂತದಲ್ಲಿದೆ ; | ಮಂಗಳೂರು ವೃತ್ತದಲ್ಲಿ ದಿನಾಂಕ: 24.08.2020 ರಂದು ಉಪ ವಲಯ ಅರಣ್ಯಾಧಿಕಾರಿ-ಕಂ-ಮೋಜಣಿದಾರರ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿತ್ತು. ಸದರಿ ಜೇಷ್ಠತಾ ಪಟ್ಟಿಯನ್ನು ಪ್ರಶ್ನಿಸಿ ಕೆಲವು ಉಪ ವಲಯ ಅರಣ್ಯಾಧಿಕಾರಿ-ಕಂ-ಮೋಜಣಿದಾರರು ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯಲ್ಲಿ ಅರ್ಜಿ ಸಂಖ್ಯೆ: 3891 - 3899 / 2020, 4361-4362/2021, 4367-4369/2021 ಮತ್ತು 3224-3236/2019 ಗಳನ್ನು ದಾಖಲಿಸಿದ್ದು, ಮಾನ್ಯ ನ್ಯಾಯಮಂಡಳಿಯು ಸದರಿ ಪ್ರಕರಣಗಳಲ್ಲಿ ಅಂತಿಮ ಆದೇಶಗಳನ್ನು ದಿನಾಂಕ:16.02.2023 ರಂದು ನೀಡಿರುತ್ತದೆ. |
| ಆ) | ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಜೇಷ್ಠತಾ ಪಟ್ಟಿಯನ್ನು ಶೀಘ್ರವಾಗಿ ಪರಿಷ್ಕರಿಸಿ ಪ್ರಕಟಿಸುವ ಬಗ್ಗೆ 3 ತಿಂಗಳ ಹಿಂದೆಯೇ ತೀರ್ಪು ನೀಡಿದ್ದು, ತೀರ್ಪಿನ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಮಾನ್ಯ ನ್ಯಾಯಮಂಡಳಿಯ ತೀರ್ಪಿನಂತೆ ಸದರಿ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಲು ದಿನಾಂಕ:30-05-2023ರಂದು ಅರಣ್ಯ ಸಂರಕ್ಷಣಾಧಿಕಾರಿ, ಮಂಗಳೂರು ವೃತ್ತ ಇವರ ಅಧ್ಯಕ್ಷತೆಯಲ್ಲಿ ವೃತ್ತ ಮಟ್ಟದಲ್ಲಿ ಒಂದು ಸಮಿತಿಯನ್ನು ರಚಿಸಲಾಗಿದೆ.<br>ಈ ಮಧ್ಯೆ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು ಅರ್ಜಿ ಸಂಖ್ಯೆ: 3891-3899/2020ರ ದಿನಾಂಕ: 16.02.2023ರ ತೀರ್ಪಿಗೆ ಸಂಬಂಧಿಸಿದಂತೆ ಶ್ರೀಮತಿ ಸಂಗೀತ ಶೆಟ್ಟಿ ಮತ್ತು ಇತರರು ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು ಇಲ್ಲಿ ಪರಿಶೀಲನಾ ಅರ್ಜಿ ಸಂಖ್ಯೆ:22& 23/2023ನ್ನು ದಾಖಲಿಸಿದ್ದು, ಪ್ರಕರಣವು ಬಾಕಿ ಇರುತ್ತದೆ. |
| ಇ) | ಸರ್ಕಾರ ಕ್ರಮ ಕೈಗೊಳ್ಳದೇ ಇದ್ದಲ್ಲಿ ವಿಳಂಬ ಧೋರಣೆಗೆ ಕಾರಣಗಳೇನು? | ಜೇಷ್ಠತಾ ಪಟ್ಟಿ ತಯಾರಿಕೆ / ಪರಿಷ್ಕರಣೆ ಒಂದು ಸಂಕೀರ್ಣ ಪ್ರಕ್ರಿಯೆಯಾಗಿದ್ದು, ನಿಯಮಾನುಸಾರ ಈಗಾಗಲೇ ಕ್ರಮ ಕೈಗೊಳ್ಳಲಾಗುತ್ತಿದೆ. |
| ಈ) | ಸರ್ಕಾರ ಯಾವ ಕಾಲಮಿತಿಯಲ್ಲಿ ಅಂತಿಮ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿ ಪ್ರಕಟಿಸುವುದು? | ಮೇಲ್ಕಂಡ ಪ್ರಕರಣಗಳಲ್ಲಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯು ನೀಡಿರುವ ತೀರ್ಪುಗಳನ್ವಯ ಹಾಗೂ ಚಾಲ್ತಿಯಲ್ಲಿರುವ ನಿಯಮಗಳನ್ವಯ ಪರಿಷ್ಕರಿಸುವ ಪ್ರಕ್ರಿಯೆಯು ಈಗಾಗಲೇ ಚಾಲನೆಯಲ್ಲಿದ್ದು, ನಿಯಮಾನುಸಾರ ಪರಿಶೀಲಿಸಿ, ಶೀಘ್ರವೇ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗುವುದು. |

**ಕಡತ ಸಂಖ್ಯೆ: ಎಫ್‌ಇಇ 102 ಎಫ್‌ಎನ್‌ಜಿ 2023**

**(ಈಶ್ವರ ಬಿ. ಖಂಡ್ರೆ)**
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು.